208 (402) ಶ್ರೀ ಕೃಷ್ಣಮೂರ್ತಿ ಕೆ ಎಂ (ಕಡೂರು)

ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ಅಲೆಮಾರಿ ಜನಾಂಗದವರು ಇರುವುದು ಸರ್ಕಾದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಸದರಿ ಜನಾಂಗದವರಿಗೆ, ಸಹಕಾರ ರಂಗದಲಲಿ ತರಬೇತಿ ನೀಡಿ ಮುಖ್ಯವಾಹಿನಿಗೆ ತರಲಾಗುವುದೇ

ಇ) ಈ ಬಗ್ಗೆ ಸರ್ಕಾರ ರೂಪಿಸಿ ಜಾರಿಗೊಳಿಸಲು ಉದ್ದೇಶಿಸಿರುವ ಕಾರ್ಯಕ್ರಮಗಳಾವುವು

ಈ) ಈ ಕಾರ್ಯಕ್ರಮಗಳ ಜಾರಿಗೆ ಪ್ರತ್ಯೇಕ ಲೆಕ್ಕಶೀರ್ಷಿಕೆಯಲ್ಲಿ ಕಲ್ಪಿಸುವ ಹಣವೆಷ್ಟು

ಉ) 2006–07 ಮತ್ತು 2007–08ನೇ ಸಾಲಿನಲ್ಲಿ ಅಲೆಮಾರಿ ಜನಾಂಗದವರನ್ನು ಗುರುತಿಸಿ ಪ್ರತಿ ತಾಲ್ಲೋಕಿನಲ್ಲಿ ನೀಡಿರುವ ಸೌಲಭ್ಯಗಳೆಷು

ಶ್ರೀ ಜಿ ಟಿ ದೇವೇಗೌಡ

ಅ) ಹೌದು

ಆ) ಹೌದು

ಇ) ಅಲೆಮಾರಿ ಜನಾಂಗದವರನ್ನು ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ನೋಂದಾಯಿಸಲು 2007–08ನೇ ಸಾಲಿನಲ್ಲಿ ಯೋಜನೆ ರೂಪಿಸಲಾಗಿದೆ

ಈ) ಈ ಕಾರ್ಯಕ್ರಮ ಅನುಷ್ಠಾನಗೊಳಿಸಲು ಪ್ರತ್ಯೇಕ ಲೆಕ್ಕಶೀರ್ಷಿಕೆ ನೀಡಿರುವುದಿಲ್ಲ ಆದರೆ 2007–08ನೇ ಸಾಲಿನ ಅನುದಾನದಲ್ಲಿ ಲೆಕ್ಕಶೀಷಿಕೆ

2425–00–108–0–58 (ಯೋಜನೆ) ಇದರಡಿ ವಿವಿಧ ಸಹಕಾರಿ ಸಂಸ್ಥೆಗಳಲ್ಲಿ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಜನರನ್ನು ಸದಸ್ಯರನ್ನಾಗಿ ನೋಂದಾಯಿಸುವ ಬಗ್ಗೆ ರೂ 50 00ಲಕ್ಷ ಅವಕಾಶ ಕಲ್ಪಿಸಿದ್ದು ಈ ಲೆಕ್ಕಶೀಷಿಕೆಯಡಿ ಅಲೆಮಾರಿ ಜನಾಂಗದವರನ್ನು ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ಮಾಡುವ ಸಂಬಂಧ ರೂ025 00ಲಕ್ಷಗಳನ್ನು ಅಲೆಮಾರಿ ಜನಾಂಗಕ್ಕೆ ಮೀಸಲಿಡಲಾಗಿದೆ

ಊ) 2006–07ನೇ ಸಾಲಿನಲ್ಲಿ ಆರ್ಥಿಕ ಸೌಲಭ್ಯವನ್ನು ನೀಡಿರಲಿಲ್ಲ 2007–08ನೇ ಸಾಲಿನಲ್ಲಿ ಅಲೆಮಾರಿ ಜನಾಂಗದವರನ್ನು ಗುರುತಿಸಿ ರೂ 25 00ಲಕ್ಷ ಅನುದಾನ ನೀಡಲಾಗಿದ್ದು, ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳಿಗೂ ಅನುದಾನ ಹಂಚಿಕೆ ಮಾಡಲಾಗುತ್ತಿದೆ

209 (403) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ

ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯ ಜಿಲ್ಲೆಗಳಲ್ಲಿ ಇರುವ ರೈತ ಸಂಪರ್ಕ ಕೇಂದ್ರಗಳ ಸಂಖ್ಯೆ ಎಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

ಆ) ಈ ಪೈಕಿ ಎಷ್ಟು ಕೇಂದ್ರಗಳು ಸ್ವಂತ ಕಟ್ಟಡದಲ್ಲಿವೆ ಹಾಗೂ ಎಷ್ಟು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ಹಾಗೂ ಇವುಗಳಿಗೆ ಪಾವತಿ ಮಾಡುತ್ತಿರುವ ಬಾಡಿಗೆ ಎಷ್ಟು (ಪ್ರತಿ ಕೇಂದ್ರದ ಬಗ್ಗೆ ಪ್ರತ್ಯೇಕ ವಿವರಗಳನ್ನು ಒದಗಿಸುವುದು)

ಇ) ಪ್ರಸಕ್ತ ಸಾಲಿನಲ್ಲಿ ಯಾವ ಯಾವ ರೈತ ಸಂಪರ್ಕ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ, ಇದಕ್ಕಾಗಿ ವೆಚ್ಚ ಮಾಡಲಾಗುವ ಹಣವೆಷ್ಟು ?